ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಕಾಮಗಾರಿ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

73(389) ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ರಾಜ್ಯದಲ್ಲಿ ಕಳೆದ 3 ವರ್ಷಗಳಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆಯಡಿಯಲ್ಲಿ ಕೈಗೊಂಡಿರುವ ಕಾಮಗಾರಿಗಳಾವುವು; (ವರ್ಷವಾರು, ಯೋಜನಾವಾರು ಮಾಹಿತಿ ನೀಡುವುದು)

(ಆ) ರಾಜ್ಯದ ಯಾವ ಯಾವ ತಾಲ್ಲೂಕುಗಳಲ್ಲಿ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳನ್ನು ಕೈಗೆತ್ತಿಕೊಳ್ಳಲಾಗಿದೆ; ಈ ಯೋಜನೆಗೆ ತಾಲ್ಲೂಕುಗಳನ್ನು ಆಯ್ಕೆ ಮಾಡಲು ಅನುಸರಿಸಲಾಗುತ್ತಿರುವ ನಿಯಮಗಳಾವುವು; (ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಯಾವ ಯಾವ ತಾಲ್ಲೂಕಿನಲ್ಲಿ ಈ ಯೋಜನೆಗಳ ಕಾಮಗಾರಿಗಳು ಪೂರ್ಣಗೊಂಡಿವೆ; ಪ್ರಗತಿಯಲ್ಲಿರುವ ಕಾಮಗಾರಿಗಳು ಯಾವ ಹಂತದಲ್ಲಿದೆ; ಕಾಮಗಾರಿಗಳನ್ನು ಪ್ರಾರಂಭಿಸಿದಿರುವ ತಾಲ್ಲೂಕುಗಳಾವುವು? (ತಾಲ್ಲೂಕುವಾರು, ಕಾಮಗಾರಿವಾರು ಪ್ರತ್ಯೇಕವಾಗಿ ವಿವರ ನೀಡುವುದು)